# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 97 (131) |
| ಸದಸ್ಯರ ಹೆಸರು | : ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : 13.12.2021 |
| ಉತ್ತರಿಸಬೇಕಾದ ಸಚಿವರು | : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಹೊಸ ಖಾಸಗಿ ಕಿರಿಯ ಪ್ರಾಥಮಿಕ ಶಾಲೆಯನ್ನು ಆರಂಭಿಸಲು ಮಂಜೂರಾತಿ ನೀಡಲು ಸರ್ಕಾರದ ಬಳಿ ಇರುವ ಕಾಯ್ದೆ, ನಿಯಮಗಳು ಮತ್ತು ಕಾನೂನುಗಳೇನು; (ವಿವರ ನೀಡುವುದು) | ಕರ್ನಾಟಕ ಶಿಕ್ಷಣ ಕಾಯ್ದೆ 1983 ರಡಿ ಹೊಸ ಖಾಸಗಿ ಶಾಲೆಗಳಿಗೆ ಅನುಮತಿ ನೀಡುವ ಸಂಬಂಧ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ ಮತ್ತು ನೋಂದಣಿ) ನಿಯಮಗಳು 1995ಕ್ಕೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 709 ಪಿಜಿಸಿ 2017 ದಿನಾಂಕ:08.03.2018ರಲ್ಲಿ ತಿದ್ದುಪಡಿಗಳನ್ನು ತರಲಾಗಿದೆ. ಪ್ರಸ್ತುತ ನಿಯಮಗಳನ್ವಯ ಹೊಸ ಖಾಸಗಿ ಶಾಲೆಗಳನ್ನು ಆರಂಭಿಸಲು ಮಂಜೂರಾತಿ ನೀಡಲಾಗುತ್ತಿದೆ. |
| ಆ) | 2015–16ನೇ ಶೈಕ್ಷಣಿಕ ವರ್ಷದಲ್ಲಿ ರಾಮನಗರ ಜಿಲ್ಲೆಯಲ್ಲಿ ಸರ್ಕಾರದ ನಿಯಮಗಳನ್ನು ಕಾಯ್ದೆಗಳನ್ನು ಬದಿಗೊತ್ತಿ ಕಾನೂನುಬಾಹಿರವಾಗಿ ಸುಮಾರು 13 ಖಾಸಗಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಆರಂಭಿಸಲು ಮಂಜೂರಾತಿ ನೀಡಿ ನೋಂದಣಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು; (ವಿವರ ನೀಡುವುದು) | ಹೌದು,<br><br>ರಾಮನಗರ ಜಿಲ್ಲೆಯಲ್ಲಿ ಹೊಸ ಖಾಸಗಿ ಶಾಲೆಗಳನ್ನು ಆರಂಭಿಸಲು ನೋಂದಣಿ ಅನುಮತಿ ನೀಡಿರುವ ಉಪನಿರ್ದೇಶಕರು (ಆಡಳಿತ) ರಾಮನಗರ ಜಿಲ್ಲೆ ಇವರ ವಿರುದ್ಧ ಸಲ್ಲಿಕೆಯಾದಂತಹ ದೂರಿನ ಆಧಾರದ ಮೇಲೆ ಇಲಾಖಾ ವಿಚಾರಣೆಯನ್ನು ನಡೆಸಿ ಸದರಿ ವಿಚಾರಣೆಯಲ್ಲಿ ಯಾವುದೇ ಆರೋಪಗಳು ದೃಢಪಟ್ಟಿರುವುದಿಲ್ಲವಾದ್ದರಿಂದ ಸರ್ಕಾರದ ಪತ್ರ ಸಂಖ್ಯೆ:ಇಡಿ 60 ಡಿಜಿಪಿ 2017 ದಿನಾಂಕ:09.08.2021ರಲ್ಲಿ ಆರೋಪವನ್ನು ಮುಕ್ತಾಯಗೊಳಿಸಲು ಆದೇಶಿಸಲಾಗಿರುತ್ತದೆ. |
| ಇ) | ಸದರಿ ಕಾನೂನುಬಾಹಿರ ನೋಂದಣಿ ಮಾಡಿರುವ ಅಧಿಕಾರಿಯ ವಿರುದ್ಧ ಸರ್ಕಾರದ ಕ್ರಮವೇನು? (ವಿವರ ನೀಡುವುದು) | |

ಇಪಿ 398 ಪಿಜಿಸಿ 2021

ಶ್ರೀ ಬಿ.ಸಿ. ನಾಗೇಶ್
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು